# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ : **140**

ಸದಸ್ಯರ ಹೆಸರು : ಶ್ರೀ ಗೋವಿಂದರಾಜು
(ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರಿಸಬೇಕಾದ ಸಚಿವರು : ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು

ಉತ್ತರಿಸಬೇಕಾದ ದಿನಾಂಕ : 05.03.2025

| | **ಪ್ರಶ್ನೆ** | **ಉತ್ತರ** |
|---|---|---|
| ಅ. | ಸಾಲಕ್ಕಾಗಿ ನಕಲಿ ದಾಖಲೆಗಳನ್ನು ಸಲ್ಲಿಸಿ, ಆಸ್ತಿತ್ವದಲ್ಲಿಲ್ಲದ ಬೋರ್‌ವೆಲ್ ರಿಗ್‌ಗಳನ್ನು ಹೊರ ರಾಜ್ಯಗಳಿಂದ ವರ್ಗಾಯಿಸುವ ಹೆಸರಲ್ಲಿ ರಾಜ್ಯದ ಪ್ರಾದೇಶಿಕ ಸಾರಿಗೆ ಕಛೇರಿಗಳಲ್ಲಿ ಮರು ನೋಂದಣಿ ದಾಖಲಾತಿ ಸೃಷ್ಟಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಈ ರೀತಿಯ ಯಾವುದೇ ಪ್ರಕರಣಗಳು ಇರುವುದಿಲ್ಲ. |
| ಆ. | ಹಾಗಿದ್ದಲ್ಲಿ, ಇದುವರೆಗೂ ಎಷ್ಟು ಪ್ರಕರಣಗಳು ನಡೆದಿವೆ; ಹಾಗೂ ಯಾವ ಯಾವ ಕ್ರಮ ತೆಗೆದುಕೊಳ್ಳಲಾಗಿದೆ: | |
| ಇ. | ಮರು ನೋಂದಣಿಗೆ ಅರ್ಜಿ ಸಲ್ಲಿಸುವ ಭೌತಿಕವಾಗಿ ವಾಹನ ಹಾಜರಿರಬೇಕೆಂಬ ನಿಯಮ ಇದೆಯೇ ಹಾಗೂ ಯಾವ ಯಾವ ನೀತಿ ನಿಯಮಗಳಿವೆ: | ಹೌದು. ಕರ್ನಾಟಕ ಮೋಟಾರು ವಾಹನಗಳ ನಿಯಮಗಳು 1989ರ ನಿಯಮ 46(2)ರ ಪ್ರಕಾರ, ಮರು ನೋಂದಣಿಗೆ ವಾಹನವನ್ನು ಸಂಬಂಧಿಸಿದ ನೋಂದಣಿ ಪ್ರಾಧಿಕಾರದ ಮುಂದೆ ಭೌತಿಕವಾಗಿ ಹಾಜರು ಪಡಿಸಬೇಕಾಗಿರುತ್ತದೆ.<br><br>ವಾಹನ ಮರು ನೋಂದಣಿ ಕುರಿತು ಕೆಳಕಂಡಂತೆ ನಿಯಮಗಳನ್ನು ರೂಪಿಸಲಾಗಿದೆ.<br><br>ಮೋಟಾರು ವಾಹನ ಕಾಯ್ದೆ 1988ರ ಕಲಂ 47(1) ಪ್ರಕಾರ, ಒಂದು ರಾಜ್ಯದಲ್ಲಿ ನೋಂದಾಯಿತ ಮೋಟಾರು ವಾಹನವನ್ನು ಹನ್ನೆರಡು ತಿಂಗಳುಗಳಿಗಿಂತ ಹೆಚ್ಚಿನ ಅವಧಿಗೆ ಮತ್ತೊಂದು ರಾಜ್ಯದಲ್ಲಿ ಕಾರ್ಯಾಚರಣೆ ಮಾಡಿದಲ್ಲಿ, ಅಂತಹ ವಾಹನದ ಮಾಲೀಕರು, ಕೇಂದ್ರ ಮೋಟಾರು ವಾಹನಗಳ ನಿಯಮಗಳು 1989ರ ನಿಯಮ 54ರ ಪ್ರಕಾರ ಮೂಲ ನೋಂದಣಿ ಪ್ರಾಧಿಕಾರದಿಂದ ನಮೂನೆ-28 ರಲ್ಲಿ ನಿರಾಕ್ಷೇಪಣಾ ಪತ್ರ (ಎನ್.ಒ.ಸಿ.) ಪಡೆದು, 30 ದಿನಗಳ ಒಳಗಾಗಿ ಹಾಗೂ ಕೇಂದ್ರ ಮೋಟಾರು ವಾಹನ ನಿಯಮಗಳು 1989ರ ನಿಯಮ 81ರಡಿ ನಿಗದಿತ ಶುಲ್ಕ ಹಾಗೂ ಕರ್ನಾಟಕ ಮೋಟಾರು ವಾಹನ ತೆರಿಗೆ ಕಾಯ್ದೆ 1957ರ ತೆರಿಗೆ ಷೆಡ್ಯೂಲ್ ನಲ್ಲಿ ನಿಗದಿಪಡಿಸಿದ ತೆರಿಗೆ ಪಾವತಿಸಿ ಮರು ನೋಂದಣಿ |

| | ಪ್ರಶ್ನೆ | ಉತ್ತರ |
|---|---|---|
| | | ಸಂಖ್ಯೆ ಪಡೆಯುವ ಸಲುವಾಗಿ ಅರ್ಜಿ ನಮೂನೆ-ಕೆ.ಎಂ.ವಿ.-27 ಮತ್ತು ಸಿ.ಎಂ.ವಿ.27ನ್ನು ಸಂಬಂಧಿಸಿದ ನೋಂದಣಿ ಪ್ರಾಧಿಕಾರಕ್ಕೆ ಸಲ್ಲಿಸಬೇಕು. |
| ಈ. | ಬೋರ್‌ವೆಲ್ ರಿಗ್‌ಗಳಿಗೆ ಬ್ಯಾಂಕ್‌ಗಳಲ್ಲಿ 1 ಕೋಟಿ ರೂ.ವರೆಗೆ ಸಾಲ ಸಿಗುತ್ತಿದ್ದು, ಇದನ್ನೇ ಬಂಡವಾಳ ಮಾಡಿಕೊಂಡು ಅರುಣಾಚಲ ಪ್ರದೇಶ, ಮಣಿಪುರ, ನಾಗಾಲ್ಯಾಂಡ್ ಸೇರಿ ಇನ್ನಿತರ ರಾಜ್ಯಗಳಿಂದ ಮರುನೋಂದಣಿ ಮತ್ತು ವಿಳಾಸ ಬದಲಾವಣೆ ಹೆಸರಲ್ಲಿ ರಾಜ್ಯದ ಆರ್.ಟಿ.ಒ.ಗಳಿಗೆ ಕಳುಹಿಸಿ, ದಾಖಲಾತಿಗಳನ್ನು ಸೃಷ್ಟಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಈ ಪ್ರಕರಣದಡಿಯಲ್ಲಿ ಇದುವರೆಗೂ ಎಷ್ಟು ಅಧಿಕಾರಿಗಳ ಮೇಲೆ ಕ್ರಮ ತೆಗೆದುಕೊಳ್ಳಲಾಗಿದೆ? | ಈ ರೀತಿಯ ಪ್ರಕರಣಗಳು ಯಾವುದೂ ಇರುವುದಿಲ್ಲ. |

**ಟಿಡಿ 6 ಟಿಡಿಕ್ಯೂ 2025**

(ರಾಮಲಿಂಗಾರೆಡ್ಡಿ)
ಸಾರಿಗೆ ಮತ್ತು ಮುಜರಾಯಿ ಸಚಿವರು.